# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.
## ಆಗಸ್ಟ್-2022ರ ಮಾಹೆಯ 1ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆಯಲ್ಲಿ ವಾರ್ಡ್ ಕಛೇರಿಯಲ್ಲಿ ನಡೆದ ಆಗಸ್ಟ್ತಿಂಗಳ 1ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

*****

ದಿನಾಂಕ: 06-08-2022

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಕುಮಾರಿ ರಂಜಿತಾ ಕೆ.ಆರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 3. | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 4. | ಶ್ರೀ ಹೇಮಂತ್ ಕುಮಾರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 5. | ಶ್ರೀ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-163 |
| 6. | ಕುಮಾರಿ ಕೃತಿ | ವೈದ್ಯಾಧಿಕಾರಿಗಳು (ಕೋವಿಡ್-19) |
| 7. | ಶ್ರೀ ಮಲ್ಲಿಕಾರ್ಜುನ್ .ಕೆ | ಮಾರ್ಷಲ್ |
| 8. | ಶ್ರೀಮತಿ ಶೋಭಾ ರಾಣಿ | ದ್ವಿ.ದ.ಸಹಾಯಕರು, ಆ.ವೈ (ಬಸವನಗುಡಿ) |
| 9. | ಶ್ರೀ ಜಯಂತ್ | ಸಾರ್ವಜನಿಕರು |
| 10. | ಶ್ರೀ ಹರಿಚಂದ್ರ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿನ ರಾಮರಾವ್ ಆಟದ ಮೈದಾನದ ಪಕ್ಕದಲ್ಲಿರುವ ಖಾಲಿ ಜಾಗದಲ್ಲಿ ತ್ಯಾಜ್ಯವನ್ನು ತುಂಬುತ್ತಿದ್ದು, ಸದರಿ ಪ್ರದೇಶವು ಬ್ಲಾಕ್ ಸ್ಪಾಟ್ ಆಗಿ ಪರಿಣಮಿಸುತ್ತಿರುತ್ತದೆ. ಆದುದರಿಂದ, ಸದರಿ ಪ್ರದೇಶದಿಂದ ತ್ಯಾಜ್ಯವನ್ನು ತೆರವುಗೊಳಿಸಿ, ಸದರಿ ಸ್ಥಳದಲ್ಲಿ ಮತ್ತೊಮ್ಮೆ ತ್ಯಾಜ್ಯವನ್ನು ಸುರಿಯದಂತೆ ಕ್ರಮವಹಿಸಬೇಕೆಂದು ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಸಭೆಯಲ್ಲಿ ಅಧ್ಯಕ್ಷರು ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯಲ್ಲಿ ಚರಂಡಿಗಳನ್ನು ದುರಸ್ಥಿಗೊಳಿಸಿ, ಹೂಳನ್ನು ರಸ್ತೆ ಬದಿಯಲ್ಲಿ ಹೆಚ್ಚು ಸಮಯದ ವರೆಗೆ ಬಿಡದೇ ಕೂಡಲೇ ರಸ್ತೆ ಬದಿಯಲ್ಲಿನ ಹೂಳನ್ನು ಕೂಡಲೇ ತೆರವುಗೊಳಿಸಲು ಕ್ರಮವಹಿಸುವಂತೆ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

3. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯಲ್ಲಿನ ನಾಡಪ್ರಭು ಕೆಂಪೇಗೌಡ ಉದ್ಯಾನವನದಲ್ಲಿ ದೀಪಗಳು ಉರಿಯುತ್ತಿರುವುದಿಲ್ಲ. ಆದ್ದರಿಂದ ಸದರಿ ಉದ್ಯಾನವನದಲ್ಲಿನ ದೀಪಗಳನ್ನು ದುರಸ್ಥಿಗೊಳಿಸಿ ಅಥವಾ ಹೊಸದಾಗಿ ಅಳವಡಿಸಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್–163ರ ವ್ಯಾಪ್ತಿಯಲ್ಲಿನ ಶ್ರೀನಿವಾಸನಗರದಲ್ಲಿರುವ ರಾಮ ಮಂದಿರ ದೇವಸ್ಥಾನದ ಹತ್ತಿರವಿರುವ ಚರಂಡಿಗಳಲ್ಲಿನ ನೀರು ಸರಾಗವಾಗಿ ಹರಿಯುತ್ತಿಲ್ಲವಾದ್ದರಿಂದ, ಚರಂಡಿಗಳಿಂದ ಹೂಳನ್ನು ತೆಗೆದು ನೀರು ಸರಾಗವಾಗಿ ಹರಿಯುವಂತೆ ಕ್ರಮವಹಿಸಬೇಕೆಂದು ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

5. ವಾರ್ಡ್–163ರ ವ್ಯಾಪ್ತಿಯಲ್ಲಿನ ಬೀದಿ ಬದಿ ವ್ಯಾಪಾರಿಗಳು ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿ ವ್ಯಾಪಾರ ವಹಿವಾಟು ನಡೆಸುತ್ತಿದ್ದು, ಇದರಿಂದ, ಪಾದಚಾರಿಗಳಿಗೆ ಮತ್ತು ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿರುವುದಾಗಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಸದರಿ ಬೀದಿ ಬದಿ ವ್ಯಾಪಾರಿಗಳನ್ನು ಕೂಡಲೇ ತೆರವುಗೊಳಿಸಬೇಕೆಂದು ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

6. ವಾರ್ಡ್–163ರ ವ್ಯಾಪ್ತಿಯಲ್ಲಿನ ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು ಧೀರ್ಘ ಕಾಲದವರೆಗೂ ವಾಹನಗಳನ್ನು ನಿಲ್ಲಿಸುತ್ತಿದ್ದು, ಸದರಿ ವಾಹನಗಳನ್ನು ಕೂಡಲೇ ತೆರವುಗೊಳಿಸಿ ಪಾದಚಾರಿಗಳ ಓಡಾಟಕ್ಕೆ ಅನುವು ಮಾಡಿಕೊಡುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

7. ವಾರ್ಡ್–163ರ ವ್ಯಾಪ್ತಿಯಲ್ಲಿ ಮರಣ ಹೊಂದಿರುವವರ ಮತ್ತು ವಾರ್ಡ್‌ನಲ್ಲಿ ವಾಸವಿಲ್ಲದವರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲು ಸಭೆಯಲ್ಲಿ ಕಂದಾಯ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

06/08/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು(ದಕ್ಷಿಣ) ಬೃ.ಬೆ.ಮ.ಪಾಲಿಕೆ, ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ವಾರ್ಡ್ ಕಛೇರಿಯ ಸೂಚನಾ ಫಲಕಕ್ಕೆ
10. ಕಛೇರಿ ಪ್ರತಿ.